ವಿಶೇಷ ನ್ಯಾಯಾಲಯಗಳ ಸ್ಥಾಪನೆ

1276(1408); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯ ಸರ್ಕಾರವು ಮಹಿಳೆಯರ ವಿರುದ್ಧದ ಪ್ರಕರಣಗಳ ತ್ವರಿತ ವಿಲೇವಾರಿಗಾಗಿ 10 ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವುದಕ್ಕೆ ಅನುಮೋದನೆ ನೀಡಿರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಈ ನ್ಯಾಯಾಲಯಗಳನ್ನು ಯಾವ ಯಾವ ಸ್ಥಳಗಳಲ್ಲಿ ಸ್ಥಾಪಿಸಲಾಗುವುದು;

ಇ) ಇಂತಹ ನ್ಯಾಯಾಲಯಗಳನ್ನು ಸ್ಥಾಪಿಸುವ ಅತ್ಯಂತ ಹಿಂದುಳಿದ ಮತ್ತು ಈಗ 371 (ಜೆ) ಅನ್ವಯ ವಿಶೇಷ ಸ್ಥಾನಮಾನವನ್ನು ಹೊಂದಿರುವ ಬೀದರ್ ಜಿಲ್ಲೆಯಲ್ಲಿ ಈ ನ್ಯಾಯಾಲಯವನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಪರಿಶೀಲನೆ ನಡೆಸುವುದೇ ?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶು ಸಂಗೋಪನಾ ಸಚಿವರು)

ಅ) ಹೌದು

ಆ) ಬೆಂಗಳೂರು ನಗರದಲ್ಲಿ ಎರಡು ಹಾಗೂ ಬೆಂಗಳೂರು ಗ್ರಾಮಾಂತರ, ಬೆಳಗಾವಿ, ಮಂಗಳೂರು, ಗುಲ್ಬರ್ಗಾ, ಕೊಡಗು–ಮಡಿಕೇರಿ, ಮಂಡ್ಯ, ಮೈಸೂರು ಮತ್ತು ರಾಮನಗರ ಜಿಲ್ಲೆಗಳಲ್ಲಿ ಒಂದೊಂದು ನ್ಯಾಯಾಲಯ ಸ್ಥಾಪಿಸಲಾಗಿದೆ.

ಇ) ಈ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯದ ಅಭಿಪ್ರಾಯ ಪಡೆದು ಕ್ರಮವಹಿಸಲಾಗುವುದು.